**O. S. No:499/2022**
**DW:1**

(ಇಂದು ದಿನಾಂಕಃ **17-04-2026** ರಂದು ಸಾಕ್ಷಿಯನ್ನು ತೆರೆದ ನ್ಯಾಯಾಲಯಕ್ಕೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.)

**ಪಾಟೀ ಸವಾಲುಃ ಶ್ರೀ ವಿ ಟಿ ಕೆ ವಕೀಲರಿಂದಃ**

4 ರಿಂದ 6 ನೇ ಪ್ರತಿವಾದಿಯರು ಸಹೋದರರು ಎಂದರೆ ಸರಿ. ಸದರಿಯವರು ದಾವಾ ಆಸ್ತಿಗಳಿಗೆ ಸಂಬಂಧಿಸಿ ಉಪ ನೋಂದಣಾಧಿಕಾರಿಗಳ ಕಚೇರಿಯಲ್ಲಿ ನೋಂದಾಯಿತ ಪಾಲು ವಿಭಾಗ ಮಾಡಿಕೊಂಡಿರುತ್ತಾರೆ ಎಂದರೆ ಸರಿ. ದಾವಾ ಆಸ್ತಿಗಳು ಖರೀದಿ ಹಿಡಿದ ಆಸ್ತಿಗಳು ಎಂದರೆ ಸಾಕ್ಷಿಯು ನನ್ನ ಅಜ್ಜನ ಆಸ್ತಿಗಳು ಎಂದು ನುಡಿದಿರುತ್ತಾರೆ. ಸದರಿ ಅಂಶವನ್ನು ನನ್ನ ಪ್ರತಿವಾದ ಪತ್ರದಲ್ಲಿ ಬರೆಸಿರುವುದಿಲ್ಲ. ಸದರಿ ಆಸ್ತಿಗಳು ನನ್ನ ಅಜ್ಜನ ಆಸ್ತಿಗಳೆಂದು ತೋರಿಸಲು ನಾನು ದಾಖಲೆಗಳನ್ನು ಹಾಜರು ಪಡಿಸಿರುತ್ತೇನೆ. ಸದರಿ ಅಂಶವನ್ನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಗಳಲ್ಲಿ ಅಜ್ಜನಿಂದ ಬಂದ ಆಸ್ತಿಗಳೆಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಹಾಗೂ ವಾದಿ ಸೇರಿ ಈ ದಾವೆಯನ್ನು ಸಲ್ಲಿಸಿರುತ್ತೇವೆ ಎಂದರೆ ಸರಿ. ನನ್ನ ಪ್ರತಿವಾದ ಪತ್ರದಲ್ಲಿಯ ಅಂಶಗಳ ಬಗ್ಗೆ ತಿಳಿದುಕೊಂಡಿರುತ್ತೇನೆ. ದಾವಾ ಆಸ್ತಿಗಳಲ್ಲಿ ನನಗಾಗಲೀ ಅಥವಾ ವಾದಿಗಾಗಲೀ ಯಾವುದೇ ರೀತಿಯ ಪಾಲು ಇಲ್ಲ ಎಂದರೆ ಸರಿಯಲ್ಲ. 4 ರಿಂದ 6 ನೇ ಪ್ರತಿವಾದಿಯರಿಗೆ ತೊಂದರೆ ಕೊಡುವ ಉದ್ದೇಶದಿಂದ ನಾನು ಹಾಗೂ ವಾದಿ ಸೇರಿ ಈ ದಾವೆ ಸಲ್ಲಿಸಿರುತ್ತೇವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ. ಹೇ. ಕೇ. ಸರಿ. ಇದೆ.

**Sd/-**

ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ
ನವಲಗುಂದ.